## ಕರ್ನಾಟಕ ಸರ್ಕಾರ

ಸಂಖ್ಯೆ: ಡಿಟಿಇ/64/ಇಎಸ್‌ಟಿ(7)2013 11327

ನಿರ್ದೇಶಕರವರ ಕಛೇರಿ,
ತಾಂತ್ರಿಕ ಶಿಕ್ಷಣ ಇಲಾಖೆ,
ಬೆಂಗಳೂರು-560 001,
ದಿನಾಂಕ:08/08/2016.

## ಸುತ್ತೋಲೆ

**ವಿಷಯ:** ತಾಂತ್ರಿಕ ಶಿಕ್ಷಣ ಇಲಾಖೆಯ ವ್ಯಾಪ್ತಿಗೊಳಪಟ್ಟಿರುವ ಸರ್ಕಾರಿ ಪಾಲಿಟೆಕ್ನಿಕ್‌ಗಳಲ್ಲಿನ ಹಾಗೂ ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳಲ್ಲಿನ ಅಧಿಕಾರಿ/ಸಿಬ್ಬಂದಿಗಳ ಹಾಜರಾತಿ ಬಗ್ಗೆ.

-*-

2015-16ನೇ ಸಾಲಿಗೆ ರಾಜ್ಯ ಯೋಜನೆಯಡಿ ಬಯೋಮೆಟ್ರಿಕ್ ಯಂತ್ರ ಹಾಗೂ ಸಿ.ಸಿ.ಟಿವಿಗಳನ್ನು ಖರೀದಿಸಲು ತಾಂತ್ರಿಕ ಶಿಕ್ಷಣ ಇಲಾಖೆಯ ವ್ಯಾಪ್ತಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಎಲ್ಲಾ ಸರ್ಕಾರಿ ಪಾಲಿಟೆಕ್ನಿಕ್‌ಗಳಲ್ಲಿ ಮತ್ತು ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳಲ್ಲಿ ಬಯೋಮೆಟ್ರಿಕ್ ಯಂತ್ರಗಳು ಹಾಗೂ ಸಿ.ಸಿ.ಟಿವಿಗಳನ್ನು ಖರೀದಿಸುವ ಉದ್ದೇಶಕ್ಕಾಗಿ ಈಗಾಗಲೇ ಅನುದಾನವನ್ನು ಬಿಡುಗಡೆ ಮಾಡಲಾಗಿರುತ್ತದೆ ಹಾಗೂ ಆದ್ಯತೆಯ ಮೇರೆಗೆ ಖರೀದಿಸಲು ಸೂಚಿಸಲಾಗಿದೆ.

ಆದರೆ, ಹಲವಾರು ಸರ್ಕಾರಿ ಪಾಲಿಟೆಕ್ನಿಕ್/ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳಲ್ಲಿ ಅಧಿಕಾರಿಗಳ/ಸಿಬ್ಬಂದಿಗಳ ಹಾಜರಾತಿಯು ಸಮರ್ಪಕವಾಗಿಲ್ಲದಿರುವ ಬಗ್ಗೆ ದೂರುಗಳು ಕೇಳಿಬರುತ್ತಿದೆ. ಆದ್ದರಿಂದ ಅಧಿಕಾರಿ/ಸಿಬ್ಬಂದಿಗಳ ಹಾಜರಾತಿಯ ಬಗ್ಗೆ ಸಂಬಂಧ ಪಟ್ಟ ಸಂಸ್ಥೆಗಳ ಪ್ರಿನ್ಸಿಪಾಲರು, ಆದ್ಯಗಮನ ನೀಡುವುದು, ನಿಗಧಿತ ಸಮಯದಲ್ಲಿ ಬಯೊಮೆಟ್ರಿಕ್ ಯಂತ್ರದಲ್ಲಿ ಸಂಸ್ಥೆಯ ಎಲ್ಲಾ ಅಧಿಕಾರಿ ಹಾಗೂ ಸಿಬ್ಬಂದಿಯವರು ಮುಂಜಾನೆ ಮತ್ತು ಸಾಯಂಕಾಲ ಹಾಜರಾತಿಯನ್ನು ನಮೂದಿಸುವುದು ಹಾಗೂ ಹಾಜರಾತಿ ವಹಿಯನ್ನು ಸಹ ಸಮರ್ಪಕವಾಗಿ ನಿರ್ವಹಿಸುವುದು ಹಾಗೂ ಸಂಸ್ಥೆಗೆ ನಿಯಮಿತ ವೇಳೆಯಲ್ಲಿ ಹಾಜರಾಗದಿರುವ ಅಧಿಕಾರಿ/ಸಿಬ್ಬಂದಿಗಳ ಬಗ್ಗೆ ಇಲಾಖೆಯ ಮುಖ್ಯಸ್ಥರಿಗೆ ಮಾಹಿತಿ ನೀಡುವದು. ಹಾಜರಾತಿಯು ಸಮರ್ಪಕವಾಗಿಲ್ಲದ ಅಧಿಕಾರಿ/ಸಿಬ್ಬಂದಿಗಳ ವಿರುದ್ಧ ಸೂಕ್ತ ಶಿಸ್ತಿನ ಕ್ರಮ ಕೈಗೊಳ್ಳಲಾಗುವುದು. ಅಸಮರ್ಪಕ ಹಾಜರಾತಿಯ ಬಗ್ಗೆ ಮಾಹಿತಿಯನ್ನು ಇಲಾಖಾ ಮುಖ್ಯಸ್ಥರಿಗೆ ನೀಡದಿದ್ದಲ್ಲಿ ಮುಂದಿನ ಆಗು ಹೋಗುಗಳಿಗೆ ಸಂಬಂಧ ಪಟ್ಟ ಸಂಸ್ಥೆಯ ಪ್ರಿನ್ಸಿಪಾಲರುಗಳನ್ನೇ ನೇರ ಜವಾಬ್ದಾರರನ್ನಾಗಿ ಮಾಡಲಾಗುವುದು. ಹಾಗೂ ಸೂಕ್ತ ಶಿಸ್ತಿನ ಕ್ರಮ ಕೈಗೊಳ್ಳಲಾಗುವುದೆಂದು ಈ ಮೂಲಕ ತಿಳಿಸಲಾಗಿದೆ.

**ಕರಡು ನಿರ್ದೇಶಕರಿಂದ ಅನುಮೋದಿಸಲ್ಪಟ್ಟಿದೆ.**

ನಿರ್ದೇಶಕರು

.....2

**ಇವರಿಗೆ,**

ತಾಂತ್ರಿಕ ಶಿಕ್ಷಣ ಇಲಾಖೆಯ ಅಧೀನದಲ್ಲಿ ಬರುವ ಎಲ್ಲಾ ಸರ್ಕಾರಿ ಪಾಲಿಟೆಕ್ನಿಕ್‌ಗಳ/ ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳ/ ಸ್ಟೆರಿಕ್/ ಸರ್ಕಾರಿ ಜೆಐಆರ್‌ಐಸಿಪಿ/ ಎಸ್‌ಆರ್‌ಸಿ.ಬಿಎಂ ಸಂಸ್ಥೆಗಳ ಪ್ರಿನ್ಸಿಪಾಲರುಗಳಿಗೆ

**ಪ್ರತಿ ಮಾಹಿತಿಗಾಗಿ:**

1. ಜಂಟಿ ನಿರ್ದೇಶಕರು(ಆಡಳಿತ), ತಾಂತ್ರಿಕ ಶಿಕ್ಷಣ ನಿರ್ದೇಶನಾಲಯ ಬೆಂಗಳೂರು
2. ಆಡಳಿತಾಧಿಕಾರಿ ತಾಂತ್ರಿಕ ಶಿಕ್ಷಣ ನಿರ್ದೇಶನಾಲಯ ಬೆಂಗಳೂರು
3. ಸಹಾಯಕ ಆಡಳಿತಾಧಿಕಾರಿ (1),(2).(3), ತಾಂತ್ರಿಕ ಶಿಕ್ಷಣ ನಿರ್ದೇಶನಾಲಯ ಬೆಂಗಳೂರು
4. ರಿಜಿಸ್ಟ್ರಾರ್(ಆಡಳಿತ) ತಾಂತ್ರಿಕ ಶಿಕ್ಷಣ ನಿರ್ದೇಶನಾಲಯ ಬೆಂಗಳೂರು
5. ಇ ಆಡಳಿತ ಘಟಕಕ್ಕೆ ವೆಬ್‌ಸೈಟ್‌ನಲ್ಲಿ ಪ್ರಚುರಪಡಿಸುವುದು.
6. ಕಡತಕ್ಕೆ